ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು

PAPER CLIPPINGS

12

ಇಲಾಖೆ / ವಿಷಯ : DEPARTMENT / SUBJECT: ಸಾರ್ವಜನಿಕ ಲೆಕ್ಕಪತ್ರ ಸಮಿತಿ

ಪತ್ರಿಕೆಯ ಹೆಸರು : NAME OF THE NEWS PAPER: ಸಂಯುಕ್ತ ಕರ್ನಾಟಕ ದಿನಾಂಕ : DATE : 22/7/2020

# ಆನ್‌ಲೈನ್ ಸಭೆಗೆ ಅವಕಾಶ ಕೊಡಿ

22/7/20

ಸಂ.ಕ ಸಮಾಚಾರ, ಬೆಂಗಳೂರು

ಖರೀದಿಯಲ್ಲಿ ಆಗಿದೆ ರಾಜ್ಯದಲ್ಲಿ ಕೊರೊನಾ ಚಿಕಿತ್ಸೆಗೆ ವೈದ್ಯಕೀಯ ಉಪಕರಣಗಳ ಎನ್ನಲಾಗಿರುವ ಅವ್ಯವಹಾರಗಳ ಹಿನ್ನೆಲೆಯಲ್ಲಿ ಸಾರ್ವಜನಿಕ ಲೆಕ್ಕಪತ್ರ ಸಮಿತಿಯ ಸಭೆಯನ್ನು ಆನ್‌ಲೈನ್ ಮೂಲಕ ನಡೆಸಲು ಹಾಗೂ ದಾಖಲೆಗಳ ಇ-ತಪಾಸಣೆಗಳಿಗೆ ಅವಕಾಶ ನೀಡಬೇಕು ಎಂದು ಆಗ್ರಹಿಸಿ ಹಿರಿಯ ಕಾಂಗ್ರೆಸ್ ಮುಖಂಡ ಎಚ್.ಕೆ ಪಾಟೀಲ್ ಅವರು ಸಭಾಧ್ಯಕ್ಷ ವಿಶ್ವೇಶ್ವರ ಹೆಗಡೆ ಕಾಗೇರಿ ಅವರಿಗೆ ಪತ್ರವನ್ನು ಬರೆದಿದ್ದಾರೆ.



ಕೊರೊನಾ ನಿರ್ವಹಣೆ ಹಾಗೂ ಪ್ರತಿ ಹಂತದ ಖರೀದಿಯಲ್ಲಿ ಭ್ರಷ್ಟಾಚಾರದ ಆರೋಪ ಕೇಳಿಬರುತ್ತಿದೆ. ಕಳಪೆ ಗುಣಮಟ್ಟದ ಚಿಕಿತ್ಸಾ ಸಾಮಗ್ರಿಗಳು ಎಂಬ ಆರೋಪವಿದೆ. ಕೋವಿಡ್ ನಿರ್ವಹಣೆಯ ಭ್ರಷ್ಟಾಚಾರ ಸಂದೇಹಗಳು ಬಲವಾಗುತ್ತಿವೆ ಎಂದು ಅವರು ಪತ್ರದಲ್ಲಿ ಪಾಟೀಲ್ ಉಲ್ಲೇಖಿಸಿದ್ದಾರೆ. ಇಂತಹ ವೇಳೆ ನಾನು ಅಧ್ಯಕ್ಷನಾಗಿರುವ ಸಾರ್ವಜನಿಕ ಲೆಕ್ಕಪತ್ರ ಸಮಿತಿ ಕರ್ತವ್ಯದಿಂದ ವಿಮುಖವಾಗಲು ಸಾಧ್ಯವಿಲ್ಲ. ಹಾಗಾಗಿ ತಪ್ಪಿತಸ್ಥರನ್ನು ಗುರುತಿಸಬೇಕು ಹಾಗೂ ಕ್ರಮ ಕೈಗೊಳ್ಳುವ ಅಗತ್ಯವಿದೆ ಎಂದು ಅವರು ಪ್ರತಿಪಾದಿಸಿದ್ದಾರೆ. ಕರ್ನಾಟಕ ಸರ್ಕಾರ ಇ-ಆಡಳಿತ ವ್ಯವಸ್ಥೆಯಲ್ಲಿ ಮೊಬೈಲ್ ಆಧಾರಿತ ವಿದ್ಯುನ್ಮಾನಚಾಲಿತ ವ್ಯವಸ್ಥೆ ಹೊಂದಿರುವ ವಾಹನದ ಮೂಲಕ ತಪಾಸಣೆ ಕೈಗೊಳ್ಳುವ ವ್ಯವಸ್ಥೆಯನ್ನು ಜಾರಿಗೆ ತಂದು ದಶಕ ಕಳೆದಿದೆ. ವಿಧಾನ ಮಂಡಲದ ಸಾರ್ವಜನಿಕ ಲೆಕ್ಕಪತ್ರ ಸಮಿತಿ ಇಂತಹ ವಿಶಿಷ್ಟ ಸಂದರ್ಭದಲ್ಲಿ ಈ ಸೌಲಭ್ಯವನ್ನು ಉಪಯೋಗ ಮಾಡಬೇಕು ಎಂದು ಎಚ್‌ಕೆ ಪಾಟೀಲ್ ಒತ್ತಾಯಿಸಿದ್ದಾರೆ.